ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಸಂಸ್ಕೃತಿ ನೀತಿಯನ್ನು ರಚಿಸುವ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು):-

1407 (1586) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಾಂಸ್ಕೃತಿಕ ನೀತಿಯನ್ನು ರಚಿಸಲಾಗಿದೆಯೇ; ಪ್ರಶಸ್ತಿಗಳನ್ನು ನೀಡಲು ಮತ್ತು ಅಕಾಡೆಮಿಗಳನ್ನು ಸ್ಥಾಪಿಸಲು ಇರುವ ಮಾರ್ಗದರ್ಶಿ ಸೂತ್ರಗಳೇನು; (ವಿವರ ನೀಡುವುದು)

(ಆ) ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಉತ್ತೇಜನ ಮತ್ತು ಪ್ರಚಾರಕ್ಕಾಗಿ ಒದಗಿಸಲಾದ ಅನುದಾನ ವೆಚ್ಚವಾಗಿದ್ದರೂ ಯೋಜನೆಯ ಅನುಷ್ಠಾನದಲ್ಲಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಯೋಜನೆಯ ಅನುಷ್ಠಾನವನ್ನು ಸಮರ್ಪಕಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಯೋಜನೆಗಳನ್ನು ಜಾರಿ ಮಾಡುವ ಅಧಿಕಾರಿಗಳ ಇಚ್ಛಾಶಕ್ತಿಯ ಕೊರತೆಯಿಂದ ಯೋಜನೆಗಳು ವಿಫಲವಾಗಿರುವ ಬಗ್ಗೆ ಸರ್ಕಾರದ ನಿಲುವೇನು ?